# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೆಯ ಅಧಿವೇಶನ

## (ಮುಂದುವರೆದ ಉಪವೇಶನಗಳು)

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ: 15ನೇ ಜೂನ್, 2017**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

### 01. ಪ್ರಶ್ನೋತ್ತರ

| | | | |
|---|---|---|---|
| ಅ. | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಇಪ್ಪತ್ತೆರಡನೆಯ ಪಟ್ಟಿ |
| ಆ. | **ತಡೆಹಿಡಿಯಲಾದ ಪ್ರಶ್ನೆ:**<br>ಹದಿನೇಳನೆಯ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 244(2362) | : | **ಮಾನ್ಯ ಗೃಹ ಸಚಿವರು** |
| ಇ. | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಇಪ್ಪತ್ತೆರಡನೆಯ ಪಟ್ಟಿ |

### 02. ನಿರ್ಣಯ

ದಿನಾಂಕ:30.05.2017ರಂದು ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀಯುತ ವಿ.ಎಸ್.ಉಗ್ರಪ್ಪ, ಶರಣಪ್ಪ ಮಟ್ಟೂರ, ಕೆ.ಸಿ.ಕೊಂಡಯ್ಯ, ಕೆ. ಅಬ್ದುಲ್ ಜಬ್ಬಾರ್, ಎಂ.ಎ.ಗೋಪಾಲಸ್ವಾಮಿ, ಆರ್. ಪ್ರಸನ್ನ ಕುಮಾರ್ ಹಾಗೂ ಹೆಚ್.ಎಂ. ರೇವಣ್ಣ ಅವರುಗಳು ಮಾನ್ಯ ಸಭಾಪತಿಯವರನ್ನು ಪದಚ್ಯುತಿಗೊಳಿಸುವ ಬಗ್ಗೆ ನೀಡಿದ್ದ ನಿರ್ಣಯದ ಸೂಚನೆಗೆ ದಿನಾಂಕ:13.06.2017ರಂದು ಸದನವು ಅನುಮತಿ ನೀಡಿರುವುದರಿಂದ, "ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಾದ ಶ್ರೀ ಡಿ.ಹೆಚ್.ಶಂಕರಮೂರ್ತಿ ಅವರನ್ನು ಸಭಾಪತಿ ಸ್ಥಾನದಿಂದ ತೆಗೆದುಹಾಕುವುದು" ಎಂಬ" ನಿರ್ಣಯವನ್ನು ಮತಕ್ಕೆ ಹಾಕುವ ಕುರಿತು ಪ್ರಸ್ತಾವ ಮಂಡಿಸುವುದು.

### 03. ಮಕ್ಕಳ ಹಕ್ಕುಗಳ ರಕ್ಷಣೆ ಬಗ್ಗೆ ವಿಶೇಷ ಚರ್ಚೆ

**ಶ್ರೀಮತಿ ಮೋಟಮ್ಮ, ಶ್ರೀಮತಿ ತಾರಾ ಅನೂರಾಧ ಹಾಗೂ ಶ್ರೀ ಬಸವರಾಜ ಹೊರಟ್ಟಿ** ಅವರುಗಳು ಮಕ್ಕಳ ಹಕ್ಕುಗಳ ರಕ್ಷಣೆಗೆ ಸಂಬಂಧಿಸಿದ ವಿಷಯದ ಬಗ್ಗೆ ಪ್ರಸ್ತಾಪಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಜ್ಯಾದ್ಯಂತ ಲಕ್ಷಾಂತರ ಹೊಅಗೆ ವೃತ್ತಿ ಬಾಂಧವರಿಗೆ ಈಗಾಗಲೇ ಜಾರಿಯಲ್ಲಿರುವ 'ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳ' ಮುಖಾಂತರ ಜಾರಿಯಲ್ಲಿರುವ ಭವಿಷ್ಯನಿಧಿ, ಪಿಂಚಣಿ ಮತ್ತು ಎನ್.ಪಿ.ಎಸ್. ಲೈಫ್ ಯೋಜನೆಯನ್ನು ಜಾರಿಗೊಳಸುವ ಬಗ್ಗೆ **ಮಾನ್ಯ ಕಾರ್ಮಿಕ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀಯುತರುಗಳಾದ: ಕೋಟ ಶ್ರೀನಿವಾಸ ಪೂಜಾರಿ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಎಂ.ಕೆ. ಪ್ರಾಣೇಶ್, ಭಾನುಪ್ರಕಾಶ್, ಆರ್. ಪ್ರಸನ್ನಕುಮಾರ್ ಹಾಗೂ ಇತರರುಗಳು** ಗ್ರಾಮ ಪಂಚಾಯತಿಗಳಲ್ಲಿನ ತೆರಿಗೆ ಬಾಕಿ, ಬಾಪೂಜಿ ಸೇವಾ ಕೇಂದ್ರಗಳನ್ನು ಶಕ್ತಿಯುತಗೊಳಸುವುದು, ಸಿಬ್ಬಂದಿಗಳ ವೇತನ ಹಾಗೂ ಪಿ.ಡಿ.ಓ.ಗಳ ಹುದ್ದೆಗಳನ್ನು ಮೇಲ್ದರ್ಜೆಗೇರಿಸುವುದು ಇತ್ಯಾದಿ ವಿಷಯಗಳ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ವಿ.ಎಸ್.ಉಗ್ರಪ್ಪ** ಅವರು ಸರ್ಕಾರದ ಹಾಗೂ ಖಾಸಗಿಯವರಿಂದ ನಡೆಯುತ್ತಿರುವ ಘನತ್ಯಾಜ್ಯ ಸಂಸ್ಕರಣಾ ಘಟಕಗಳು ಹಾಗೂ ಅವುಗಳು ಸಂಸ್ಕರಣೆ ಮಾಡುತ್ತಿರುವ ಘನತ್ಯಾಜ್ಯದ ಪ್ರಮಾಣ ಹಾಗೂ ವಿಲೇವಾರಿಗಾಗಿ ಮೀಸಲಿಟ್ಟಿರುವ ಹಣದ ಕುರಿತು **ಮಾನ್ಯ ಪೌರಾಡಳತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರ** ಗಮನ ಸೆಳೆಯುವುದು.

## 05. ವಿಧಾನ ಮಂಡಲದ ಸಮಿತಿಯ ವರದಿಯ ಮೇಲೆ ಚರ್ಚೆ

**ಶ್ರೀಯುತರುಗಳಾದ: ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ), ಕೆ.ಸಿ. ಕೊಂಡಯ್ಯ ಹಾಗೂ ಅಲ್ಲಂ ವೀರಭದ್ರಪ್ಪ** ಅವರುಗಳು ಕರ್ನಾಟಕ ವಿಧಾನ ಮಂಡಲದ ಹಿಂದುಳದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2014-15ನೇ ಸಾಲಿನ ಮೂರನೇ ವರದಿಯಲ್ಲಿನ ಶಿಫಾರಸ್ಸುಗಳು ಹಾಗೂ ಅವುಗಳ ಮೇಲೆ ಸರ್ಕಾರ ಕೈಗೊಂಡಿರುವ ಅನುಸರಣಾ ವರದಿಯ ಬಗ್ಗೆ ಪ್ರಸ್ತಾಪಿಸುವುದು ಹಾಗೂ ಸರ್ಕಾರದಿಂದ ಉತ್ತರ.

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**